# <u>ಪತ್ರಿಕಾ ಪ್ರಕಟಣೆ</u>

ದಿನಾಂಕ: 16-10-2023 ರಂದು ದಕ್ಷಿಣ ಕನ್ನಡ ಜಿಲ್ಲಾ ವಿಶ್ವ ಹಿಂದೂ ಪರಿಷತ್‌ನ ಸಹ ಕಾರ್ಯದರ್ಶಿಯಾದ ಶರಣ್ ಪಂಪ್‌ವೆಲ್‌ನು ತನ್ನ ಬೆಂಬಲಿಗರೊಂದಿಗೆ ಬಂದು ಶ್ರೀ ಮಂಗಳಾದೇವಿ ದೇವಸ್ಥಾನದ ವಠಾರದಲ್ಲಿರುವ ಹಿಂದೂ ವ್ಯಕ್ತಿಗಳ ಮಾರಾಟದ ಅಂಗಡಿಗಳ ಮೇಲೆ ಕೇಸರಿ ಧ್ವಜವನ್ನು ನಟ್ಟು ತದನಂತರ ಶರಣ್ ಪಂಪ್‌ವೆಲ್ ಈತನು ಎಲ್ಲಾ ಹಿಂದೂಗಳಿಗೆ ತಮಗೆ ಬೇಕಾದ ಅಗತ್ಯ ಸಾಮಗ್ರಿಗಳನ್ನು ಹಿಂದೂ ಸಮುದಾಯದ ವ್ಯಾಪರಾಸ್ಥರು ಹೊಂದಿರುವ ಅಂಗಳಲ್ಲಿ ಮಾತ್ರ ಪಡೆದುಕೊಳ್ಳುವಂತೆ ಪತ್ರಿಕಾ ಪ್ರಕಟಣೆ ನೀಡಿರುತ್ತಾನೆ. ಈ ಕೃತ್ಯ ಹಾಗೂ ಪತ್ರಿಕಾಗೋಷ್ಠಿ ಭಿನ್ನಕೋಮಿನ ನಡುವೆ ಕೋಮು ಸಾಮರಸ್ಯಕ್ಕೆ ದಕ್ಕೆ ಉಂಟು ಮಾಡಿರುವುದಾಗಿರುತ್ತದೆ. ದಕ್ಷಿಣ ಪೊಲೀಸ್ ಠಾಣೆಯ ಕಾನೂನು ಸುವ್ಯವಸ್ಥೆ ವಿಭಾಗದ ಪಿ.ಎಸ್.ಐ ರವರಾದ ಶ್ರೀ ಮನೋಹರ್ ಪ್ರಸಾದ್ ಇವರ ದೂರಿನ ಮೇಲೆ ಶರಣ್ ಪಂಪ್‌ವೆಲ್ ಹಾಗೂ ಇತರರ ವಿರುದ್ಧ ಮಂಗಳೂರು ದಕ್ಷಿಣ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ.

ಸಹಿ/-

ಪೊಲೀಸ್ ಆಯುಕ್ತರು,
ಮಂಗಳೂರು ನಗರ, ಮಂಗಳೂರು

ಸ್ಥಳ: ಮಂಗಳೂರು
ದಿನಾಂಕ: 18-10-2023